# <u>ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯ, ಜೇವರ್ಗಿ</u>

**ಸಿಸಿ ನಂ.8/2026**

| | | |
|---|---|---|
| ಫಿರ್ಯಾರ್ದುದಾರಃ | : | ಕರ್ನಾಟಕ ಸರ್ಕಾರದ ಪರ ಜೇವರ್ಗಿ ಪೋಲಿಸರು |
| | | **ವಿರುದ್ಧ** |
| ಆರೋಪಿ | : | ಅನೀಲ ತಂದೆ ದಶರಥ ಕೋಲಾಕರ್,<br>ವಯಸ್ಸುಃ 48 ವರ್ಷ ,<br>ಉದ್ಯೋಗಃ ಲಾರಿ ಚಾಲಕ/ಮಾಲಿಕ,<br>ವಾಸಃ ಲಂಗರ ಹನುಮಾನ ನಗರ, ಕಲುಬುರಗಿ |

## <u>ಆಪಾದನೆ</u>

ಶ್ರೀಮತಿ ತಯ್ಯಬಾ ಸುಲ್ತಾನಾ, ಬಿ.ಎ., ಎಲ್.ಎಲ್.ಬಿ., ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳಾದ ನಾನು, ಆರೋಪಿಯಾದ ನಿಮ್ಮ ಮೇಲೆ ಮಾಡುವ ಆಪಾದನೆ ಏನೆಂದರೆ,

ದಿನಾಂಕ 30-09-2025ರಂದು ಸಂಜೆ 05-00 ಪಿ.ಎಂ. ಗಂಟೆ ಸಮಯದಲ್ಲಿ ಜೇವರ್ಗಿ ಪೋಲಿಸ ಠಾಣಾ ವ್ಯಾಪ್ತಿಯ ಜೇವರ್ಗಿ-ಶಹಾಪೂರ ರಸ್ತೆಯ ಜೇವರ್ಗಿ ಹೊರವಲಯದ ಸತ್ತಾರಸಾಬ ಪೆಟ್ರೋಲ್ ಪಂಪ್ ಹತ್ತಿರದ ರಸ್ತೆಯ ಮೇಲೆ ಆರೋಪಿಯಾದ ನೀವು ನಿಮ್ಮ ಲಾರಿ ನಂ.ಕೆಎ-63-1786ನೇದ್ದನ್ನು ಅತೀ ವೇಗ ಮತ್ತು ಅಜಾಗುರಕತೆಯಿಂದ ಚಾಲನೆ ಮಾಡಿ ಸದರಿ ರಸ್ತೆಯ ಎಡಭಾಗದಲ್ಲಿ ತಮ್ಮ ಟಂಟಂನಲ್ಲಿ ಪ್ರಯಾಣಿಕರನ್ನು ಕೂರಿಸಿಕೊಂಡು ಹೋಗುತ್ತಿದ್ದಾಗ ಸದರಿ ಟಂಟಂ ವಾಹನಕ್ಕೆ ಹಿಂದಿನಿಂದ ಡಿಕ್ಕಿಪಡಿಸಿ ಅಪಘಾತಪಡಿಸಿದ ಕಾರಣ ಸದರಿ ಟಂಟಂ ವಾಹನವು ರಸ್ತೆ ಬದಿಯ ತಗ್ಗಿನಲ್ಲಿ ಬಿದ್ದು ಸದರಿ ಟಂಟಂ ವಾಹನವದಲ್ಲಿ ಪ್ರಯಾಣಿಸುತ್ತಿದ್ದ ಚಾಸಾ-1ರವರ ಎಡಭಾಗದ ಸೊಂಟದ ಕೆಳ ಚಪ್ಪೆಯ ಹತ್ತಿರ ಗುಪ್ತಗಾಯ ಮತ್ತು ಚಾಸಾ-4ರವರ ಬಲಗಡೆಯ ಸೊಂಟಕ್ಕೆ ಬಲಗಾಲ ಮೊಣಕಾಲ ಕೆಳಗೆ ಗುಪ್ತಗಾಯ ಹಾಗೂ ಚಾಸಾ-5ರವರ ತಲೆಗೆ ಬಲಗಾಲ ಮೊಳಕಾಲ ಹತ್ತಿರ ಗುಪ್ತಗಾಯ ಮತ್ತು ಬಲಗಡೆಯ ಭುಜಕ್ಕೆ ತರಚಿದ ರಕ್ತಗಾಯ ಹಾಗೂ ಗುಪ್ತಗಾಯ ಹಾಗೂ ಚಾಸಾ-6ರವರಿಗೆ ಸಣ್ಣಪುಟ್ಟಗಾಯಗಳಾಗುವಂತೆ ಮಾಡಿ ಸದರಿ ಅಪಘಾತದ ವಿಚಾರವನ್ನು ಪೊಲೀಸರಿಗೆ ತಿಳಿಸದೆ ಹಾಗೂ ಗಾಯಾಳುಗಳಿಗೆ ಪ್ರಥಮ ಚಿಕಿತ್ಸೆಗಾಗಿ ಆಸ್ಪತ್ರೆಗೆ ದಾಖಲಿಸದೆ ಲಾರಿಯನ್ನು ಸ್ಥಳದಲ್ಲೇ ಬಿಟ್ಟು ಓಡಿ ಹೋದ ಕಾರಣ ಕಾರಣ, ಭಾರತೀಯ ನ್ಯಾಯ ಸಂಹಿತಾ ಕಲಂ 281, 125(ಎ) ಹಾಗೂ ಭಾರತೀಯ ಮೋಟಾರ ವಾಹನ ಕಾಯ್ದೆ ಕಲಂ.187 ರಡಿಯಲ್ಲಿ ಶಿಕ್ಷಾರ್ಹ ಅಪರಾಧ ಎಸಗಿದ ಬಗ್ಗೆ ಆರೋಪಿಸಲಾಗಿದೆ?

ಸದರಿ ಆಪಾದನೆಗಳ ಬಗ್ಗೆ ವಿಚಾರಣೆಗೆ ಗುರಿಯಾಗಬೇಕೆಂದು ಈ ಮೂಲಕ ನಿರ್ದೇಶಿಸುತ್ತೇನೆ.

ಸದರಿ ಮೇಲಿನ ಆರೋಪಣೆಗಳನ್ನು ತೆರೆದ ನ್ಯಾಯಾಲಯದಲ್ಲಿ ದಿಃ 13-03-2026 ರಂದು ಆರೋಪಿಗೆ ಓದಿ ಹೇಳಿ ಅವರು ಕೊಟ್ಟ ಉತ್ತರವನ್ನು ಯಥಾವತ್ತಾಗಿ ನಮೂದಿಸಿಕೊಳ್ಳಲಾಯಿತು.

**ಈ ಮೇಲ್ಕಂಡ ಆರೋಪಗಳ ಬಗ್ಗೆ ವಿಚಾರಣೆಗೆ ಈ ಕೆಳಕಂಡಂತೆ ಆದೇಶಿಸುತ್ತೇನೆ.**

ಪ್ರಶ್ನೆ-1ಃ ಮೇಲ್ಕಂಡ ಎಲ್ಲಾ ಆಪಾದನೆಗಳನ್ನು ಓದಿ ಹೇಳಿದ್ದು ಅರ್ಥವಾಯಿತೇ?

ಆರೋಪಿ ಉತ್ತರಃ

ಪ್ರಶ್ನೆ-2ಃ ಸದರೀ ಆಪಾದನೆಗಳನ್ನು ಒಪ್ಪಿಕೊಳ್ಳುವೆಯೋ? ಅಥವಾ
ವಿಚಾರಣೆಯಾಗಬೇಕೋ?

ಆರೋಪಿ ಉತ್ತರಃ

ಮೇಲ್ಕಂಡ ಎಲ್ಲಾ ಆಪಾದನೆಗಳನ್ನು ನನ್ನ ಸಮಕ್ಷಮ ಓದಿ ಹೇಳಿ ಅವರ ಹೇಳಿಕೆಯನ್ನು ಪಡೆದುಕೊಂಡು ಸತ್ಯವಾಗಿದೆ ಎಂದು ದೃಢೀಕರಿಸುತ್ತೇನೆ.

ದಿನಾಂಕಃ 13-03-2026

(ಶ್ರೀಮತಿ ತಯ್ಯಬಾ ಸುಲ್ತಾನಾ)
ಹಿರಿಯ ಸಿವಿಲ್ ಮತ್ತು ಪ್ರ.ದ.ನ್ಯಾ.
ದಂಡಾಧಿಕಾರಿಗಳು, ಜೇವರ್ಗಿ